# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 552(612)
ಸದಸ್ಯರ ಹೆಸರು : ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 22.07.2024.
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2024-25 ಶೈಕ್ಷಣಿಕ ಸಾಲಿಗೆ ರಾಜ್ಯ ಮತ್ತು ಕೇಂದ್ರ ಪಠ್ಯಕ್ರಮ (CBSE, ICSE) ಅನುಸರಿಸುವ ಶಾಲೆಗಳಲ್ಲಿ ಒಂದನೇ ತರಗತಿಗೆ ಮಗುವನ್ನು ದಾಖಲಿಸಲು ನಿಗದಿಪಡಿಸಿರುವ ವಯೋಮಾನ ಎಷ್ಟು; | ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಕಲಂ 20 ರಂತೆ ಹಾಗೂ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ-2009ರ ಸೆಕ್ಷನ್-12(1)ರ ಅಡಿಯಲ್ಲಿ 2018-19ನೇ ಸಾಲಿನಿಂದ ಜಾರಿಗೆ ಬರುವಂತೆ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಲ್ಲಿ 1 ನೇ ತರಗತಿಗೆ ದಾಖಲಾಗಲು ಮಗುವಿಗೆ ಕನಿಷ್ಠ ವಯೋಮಿತಿಯನ್ನು 5 ವರ್ಷ 5 ತಿಂಗಳು ಹಾಗೂ ಗರಿಷ್ಠ 7 ವರ್ಷಗಳಿಗೆ ನಿಗಧಿಪಡಿಸಲಾಗಿದೆ. |
| ಆ) | ಶೈಕ್ಷಣಿಕ ವರ್ಷದ ಜೂನ್ 1ಕ್ಕೆ ಮಗುವಿಗೆ 6 ವರ್ಷ ಪೂರ್ಣಗೊಂಡಿರುವುದು ಕಡ್ಡಾಯ ಎನ್ನುವ ನಿಯಮ ಯಾವ ಶೈಕ್ಷಣಿಕ ಸಾಲಿನಿಂದ ಅನ್ವಯಿಸಲಿದೆ; | 2025-26ನೇ ಶೈಕ್ಷಣಿಕ ಸಾಲಿನಿಂದ |
| ಇ) | ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಕೇಂದ್ರ ಪಠ್ಯಕ್ರಮ (CBSE, ICSE) ಅನುಸರಿಸುವ ಶಾಲೆಗಳಲ್ಲಿ ಒಂದನೇ ತರಗತಿಗೆ ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳಲು 5.5 ವರ್ಷ (5 ವರ್ಷ 5 ತಿಂಗಳು)5.10 ವರ್ಷ, 6 ವರ್ಷ ಹೀಗೆ ಮನಸೋಇಚ್ಛೆ ವಯೋಮಿತಿ ನಿರ್ದಿಷ್ಟಪಡಿಸಿಕೊಂಡು ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ. |
| ಈ) | ಬಂದಿದ್ದಲ್ಲಿ, ಸರ್ಕಾರವು ಕೇಂದ್ರ ಪಠ್ಯಕ್ರಮ (CBSE, ICSE) ಅನುಸರಿಸುವ ಶಾಲೆಗಳಿಗೆ ಈ ಕುರಿತು ಯಾವ ರೀತಿಯ ನಿರ್ದೇಶನ ನೀಡಲಿದೆ; | ಉದ್ಭವಿಸುವುದಿಲ್ಲ. |

| | | |
|---|---|---|
| ಉ) | ಕರ್ನಾಟಕ ರಾಜ್ಯ ಶಿಕ್ಷಣ ನೀತಿ ಆಯೋಗವು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು; ಆಯೋಗದಿಂದ ವರದಿಯನ್ನು ಯಾವಾಗ ನಿರೀಕ್ಷಿಸಬಹುದು; (ಸಂಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯ ಶಿಕ್ಷಣ ನೀತಿ ಆಯೋಗವು ಈವರೆವಿಗೂ ಸರ್ಕಾರಕ್ಕೆ ವರದಿ ಸಲ್ಲಿಸಿರುವುದಿಲ್ಲ. ಶಿಕ್ಷಣದ ವಿವಿಧ ಕ್ಷೇತ್ರಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಶಿಫಾರಸ್ಸುಗಳನ್ನು ನೀಡಲು ಸಂಚಾಲಕರ ನೇತೃತ್ವದಲ್ಲಿ 13 ಅನುಷ್ಠಾನ ಕಾರ್ಯಪಡೆಗಳನ್ನು ರಚಿಸಲಾಗಿದೆ. ಸದರಿ ಕಾರ್ಯಪಡೆಗಳ ಸಭೆಗಳಲ್ಲಿ ಶಿಕ್ಷಣ ಕ್ಷೇತ್ರದ ಹಲವಾರು ತಜ್ಞರು, ಭಾಗೀದಾರರೊಡನೆ ಹಾಗೂ ಇಲಾಖಾ ಪ್ರತಿನಿಧಿಗಳೊಡನೆ ಚರ್ಚಿಸಿ ಕಾರ್ಯಪಡೆಗಳು ತಮಗೆ ಸಂಬಂಧಪಟ್ಟ ಕ್ಷೇತ್ರದಲ್ಲಿ ವರದಿಗಳನ್ನು ಅಂತಿಮಗೊಳಿಸಿ ರಾಜ್ಯ ಶಿಕ್ಷಣ ನೀತಿ ಆಯೋಗದ ಅಧ್ಯಕ್ಷರಿಗೆ ಸಲ್ಲಿಸಲಿದ್ದಾರೆ. ತದನಂತರ, ಆಯೋಗವು ಕ್ರೋಢೀಕೃತ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ. |
| ಊ) | ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣದಲ್ಲಿ ರಾಜ್ಯ ಶಿಕ್ಷಣ ನೀತಿಯು ಯಾವ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರಲಿದೆ; (ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯ ಶಿಕ್ಷಣ ನೀತಿ ರಚನಾ ಕಾರ್ಯ ಪ್ರಗತಿಯಲ್ಲಿದ್ದು, ಪೂರ್ಣಗೊಂಡ ನಂತರ ಜಾರಿಗೆ ಕ್ರಮವಹಿಸಲಾಗುವುದು. |

ಸಂಖ್ಯೆ: ಇಪಿ 212 ಪಿಜಿಸಿ 2024

(ಎಸ್. ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು